ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಮೀಸಲಾತಿ ಮತ್ತು ಪ್ರವರ್ಗಗಳನ್ನು ನಿಗದಿಪಡಿಸಲು ಅನುಸರಿಸುತ್ತಿರುವ ಮಾನದಂಡಗಳ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

635 (771) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗ್ರಾಮ ಪಂಚಾಯಿತಿ ಚುನಾವಣೆಗಳಲ್ಲಿ ಸದಸ್ಯರುಗಳಿಗೆ ಮತ್ತು ಅಧ್ಯಕ್ಷರುಗಳಿಗೆ ಹಾಲಿ ಜಾರಿಯಲ್ಲಿರುವ ಮೀಸಲಾತಿ ಹಾಗೂ ಅದರ ಪ್ರವರ್ಗಗಳು ಯಾವುವು ;

(ಆ) ಸದರಿ ಮೀಸಲಾತಿ ಹಾಗೂ ಪ್ರವರ್ಗಗಳನ್ನು ನಿಗದಿಪಡಿಸಲು ಅನುಸರಿಸುತ್ತಿರುವ ಮಾನದಂಡಗಳು ಹಾಗೂ ಮಾರ್ಗಸೂಚಿಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಮೀಸಲಾತಿ ಹಾಗೂ ಪ್ರವರ್ಗಗಳನ್ನು ಎಷ್ಟು ವರ್ಷಗಳಿಗೊಮ್ಮೆ ಬದಲಾವಣೆ ಮಾಡಲಾಗಿದೆ ಬದಲಾವಣೆ ಮಾಡಲು ಯಾವ ಮಾನದಂಡಗಳನ್ನು ಅನುಸರಿಲಾಗುತ್ತದೆ ; ; (ವಿವರವಾದ ಮಾಹಿತಿ ನೀಡುವುದು)

(ಈ) ತುಮಕೂರು ಜಿಲ್ಲೆ ತುರುವೇಕೆರೆ ತಾಲೂಕಿನಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳು ಇವೆ ; ಅವುಗಳ ವ್ಯಾಪ್ತಿಗೆ ಒಳಪಡುವ ಹಳ್ಳಿಗಳು ಯಾವುವು ? (ಪಂಚಾಯಿತಿವಾರು ಮಾಹಿತಿ ನೀಡುವುದು)